| ಕರ್ನಾಟಕ ಸರ್ಕಾರ | | | (ಸಿ.ಆರ್.ಪಿ-67) |
|---|---|---|---|
| ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4 | ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ | | |
| | ಸಿ.ಸಿ ನಂ. 4641/2022 | | |
| | | ಸಿ.ಡಬ್ಲೂ | 2 |
| | | ಪಿ.ಡಬ್ಲೂ | 2 |
| ಸಾಕ್ಷಿದಾರರ ಹೆಸರು | ರಘು.ಹೆಚ್.ಆರ್. ಬಿನ್ ವಿ. ರಾಮಯ್ಯ | | |
| ವಯಸ್ಸು | 42 ವರ್ಷ | | |
| ಉದ್ಯೋಗ | ಚಾಲಕ | | |
| ವಾಸಸ್ಥಳ | ಚನ್ನಪಟ್ಟಣ | | |

**ದಿನಾಂಕ 22.09.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ:- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

**1)** ಚಾಸಾ-**1** ನಮ್ಮ ಗ್ರಾಮದವರು. ಚಾಸಾ-**3** ಮತ್ತು **4** ರವರು ನನ್ನ ಸ್ನೇಹಿತರು. ಆರೋಪಿತನ ಪರಿಚಯ ಇಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿಯು ನಿಪಿ.**2** ಸ್ಥಳ ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ **2**(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಅಮಾನತ್ತು ಪಂಚನಾಮೆ ಮತ್ತು ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ **3**(ಬಿ) ಎಂದು ಗುರುತಿಸಲಾಯಿತು. ನಿಪಿ.**2** ಮತ್ತು **3** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ನಿಪಿ.**2** ಮತ್ತು **3** ಕ್ಕೆ ಪೊಲಿಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

1) ದಿ.**01.08.2022** ರಂದು ಬೆಳಿಗ್ಗೆ **11** ಗಂಟೆ ಸಮಯದಲ್ಲಿ ಚನ್ನಪಟ್ಟಣ ಟೌನ್ ಪಾಲಿಟೆಕ್ನಿಕ್ ಕಾಲೇಜು ಮುಂಭಾಗ ಬೆಂಗಳೂರು ಕಡೆಗೆ ಹೋಗುವ ರಸ್ತೆಯಲ್ಲಿ ಶಂಕರ್ ಗೌಡ ರವರು ಕೆಎ**50**.ಇ.**8746** ನೇದ್ದರ ದ್ವಿಚಕ್ರವಾಹನದಲ್ಲಿ ಸಾತನೂರು ವೃತ್ತದ ಕಡೆಗೆ ಹೋಗುತ್ತಿದ್ದರು ಮತ್ತು ಆವೇಳೆಗೆ ಆರೋಪಿತನು ಕೆಎ**55**ಇಸಿ.**0983** ನೇದ್ದರ ಪಲ್ಸರ್ ವಾಹವನ್ನು

ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮುಂದೆ ಹೋಗುತ್ತಿದ್ದ ಶಂಕರ್ ಗೌಡರ ವಾಹನಕ್ಕೆ ಡಿಕ್ಕಿ ಪಡಿಸಿದ್ದರು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಆ ರೀತಿ ಅಪಘಾತ ಪಡಿಸಿದ ಕಾರಣ ಶಂಕರ್ ಗೌಡ ರವರ ತಲೆ, ಕುತ್ತಿಗೆ, ಮೂಗು ಮತ್ತುಸೊಂಟ ಮುರಿದು ತೀವ್ರ ಪೆಟ್ಟುಗಳು ಬಿದ್ದಿತ್ತು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ನಂತರ ನಾನು ಗಾಯಾಳುವನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿ ಸೇರಿಸಿದ್ದು ನಂತರ ಹೆಚ್ಚಿನ ಚಿಕಿತ್ಸೆಗಾಗಿ ಗಾಯಾಳುವನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಿದ್ದ ನಂತರ ಅಲ್ಲಿ ದಿಃ**07.08.2022** ರಂದು ಗಾಯಾಳು ಮೃತಪಟ್ಟರುತ್ತಾರೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ಈ ವಿಚಾರಗಳ ಕುರಿತು ಚಾಸಾ-**1** ನಿಪಿ.**1** ರಂತೆ ದೂರು ದಾಖಲಿಸಿದ ನಂತರ ಪೊಲೀಸರು ದಿಃ**01.08.2022** ರಂದು ಗುನ್ಹಾ ಸ್ಥಳಕ್ಕೆ ಭೇಟಿ ಕೊಟ್ಟು ಚಾಸಾ-**1** ರವರು ತೋರಿಸಿದ ಜಾಗದಲ್ಲಿ ಪೋಲಿಸರು ನನ್ನ ಮತ್ತು ಚಾಸಾ-**3** ರವರ ಸಮಕ್ಷಮ ನಿಪಿಃ **2** ರಂತೆ ಪಂಚನಾಮೆಯನ್ನು ಮಾಡಿದ್ದರು ಹಾಗೂ ದಿಃ **07.08.2022** ರಂದು ನಿಪಿ.**3** ರಂತೆ ಅಪಘಾತಕ್ಕೊಳಪಟ್ಟ ವಾಹನಗಳನ್ನು ಜಪ್ತುಪಡಿಸಿ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳ ಕುರಿತು ನಾನು ದಿಃ**07.08.2022** ರಂದು ಈಗ ಓದಿ ಹೇಳಿದಂತ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಆರೋಪಿತನು ನನಗೆ ಪರಿಚಯ ಇದ್ದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

**<u>ವಾಟೀ ಸವಾಲುಃ</u> ಆರೋಪಿ ಪರ ವಕೀಲರು ವಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು)**

ಓ.ಹೆ.ಕೆ.ಸರಿ ಇದೆ.

ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು
ಚನ್ನಪಟ್ಟಣ.